## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ರಾಜ್ಯದ 189 ಗ್ರಾಮೀಣ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಗಾಂಧಿಪಥ ಗ್ರಾಮಪಥ (ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆ ಹಂತ-4) ರಡಿ 4385.71 ಕಿ.ಮೀ. ಉದ್ದದ ರಸ್ತೆಗಳನ್ನು ರೂ.3982.50 ಕೋಟಿಗಳಲ್ಲಿ ಅನುಷ್ಠಾನಕ್ಕೆ ತರಲು ಅನುಮೋದನೆ ನೀಡುವ ಕುರಿತು.

ಓದಲಾಗಿದೆ:

1. ದಿನಾಂಕ 28.09.2016 ರ ಸಚಿವ ಸಂಪುಟದ ನಿರ್ಣಯ ಪ್ರಕರಣ ಸಂಖ್ಯೆ:ಸಿ-479/2016.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:44: ಆರ್‌ಆರ್‌ಸಿ:2016, ದಿ:13-10-2016.
3. ದಿನಾಂಕ 15.02.2017 ರ ಸಚಿವ ಸಂಪುಟದ ನಿರ್ಣಯ ಪ್ರಕರಣ ಸಂಖ್ಯೆ:ಸಿ-95/2017.

ಪ್ರಸ್ತಾವನೆ:

2016-17ನೇ ಸಾಲಿನಲ್ಲಿ ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆ ಹಂತ-4ನ್ನು (ಗಾಂಧಿ ಪಥ ಗ್ರಾಮ ಪಥ) ಪ್ರತಿ ಗ್ರಾಮೀಣ ವಿಧಾನ ಕ್ಷೇತ್ರದಲ್ಲಿ ತಲಾ 20ಕಿ.ಮೀ.ನಂತೆ ಅಭಿವೃದ್ಧಿಪಡಿಸಲು ಆಯವ್ಯಯದಲ್ಲಿ ಘೋಷಿಸಿದಂತೆ ಗಾಂಧಿ ಪಥ - ಗ್ರಾಮ ಪಥ (ನಮ್ಮ ಗ್ರಾಮ ನಮ್ಮ ರಸ್ತೆ ಹಂತ-4) ಯೋಜನೆಯನ್ನು ಒಟ್ಟು 4290.00 ಕಿ.ಮೀ. ಉದ್ದದ ರಸ್ತೆಯನ್ನು ರೂ.3261.00 ಕೋಟಿಗಳ ಮೊತ್ತದಲ್ಲಿ ಅಭಿವೃದ್ಧಿ ಪಡಿಸಲು ಹಾಗೂ ಯೋಜನೆಯ ಡಿ.ಪಿ.ಆರ್. ತಯಾರಿಕೆಗೆ ಬೇಕಾಗುವ ರೂ.12.75ಕೋಟಿಗಳ ಅನುದಾನವನ್ನು 2016-17ನೇ ಸಾಲಿನಲ್ಲಿ ಲೆ.ಶೀ. "Revenue Releases to GPs – Rural Roads"ಅಡಿ ಒದಗಿಸಿದ ಅನುದಾನದಲ್ಲಿ ಭರಿಸುವಂತೆ ದಿನಾಂಕ:28.09.2016ರಂದು ನಡೆದ ಸಚಿವ ಸಂಪುಟದಲ್ಲಿ ಅನುಮೋದನೆ ನೀಡಲಾಗಿತ್ತು. ಮೇಲೆ ಓದಲಾದ (2)ರ ಆದೇಶದಲ್ಲಿ ಗಾಂಧಿ ಪಥ ಗ್ರಾಮ ಪಥ (ನಮ್ಮ ಗ್ರಾಮ ನಮ್ಮ ರಸ್ತೆ ಹಂತ-4) ಯೋಜನೆಯ ಅನುಷ್ಠಾನಕ್ಕೆ ತರಲು ಅನುಮೋದನೆ ನೀಡಲಾಗಿರುತ್ತದೆ.

ಅದರನ್ವಯ ಡಿ.ಪಿ.ಆರ್. ಗಳನ್ನು ವಾಸ್ತವಿಕವಾಗಿ ತಯಾರಿಸುವಾಗ ಷೆಡ್ಯೂಲ್ ದರಗಳು ಪ್ರಸಕ್ತ ಸಾಲಿನಲ್ಲಿ ಹೆಚ್ಚಳವಾದ ಕಾರಣ, 112 ಸೇತುವೆ ನಿರ್ಮಾಣಗಳನ್ನು ಕಡ್ಡಾಯವಾಗಿ ಕೈಗೊಳ್ಳಬೇಕಾದ ಕಾರಣ, ಶಾಸಕರು ನೀಡಿದ ರಸ್ತೆಗೆ ಸಂಪೂರ್ಣ ಸಂಪರ್ಕ ಕಲ್ಪಿಸುವಲ್ಲಿ 95.71 ಕಿ.ಮೀ ರಸ್ತೆ ಉದ್ದ ಹೆಚ್ಚುವರಿಯಾದ ಕಾರಣ, ಹಲವು ರಸ್ತೆಗಳ ಅಗಲ 3.75ಮೀ. ನಿಂದ 5.50 ಮೀ.ವರೆಗೆ ಹೆಚ್ಚಳದ ಕಾರಣ ಹಾಗೂ ಕೆಲವೊಂದು ರಸ್ತೆಗಳು ಅರಣ್ಯ ಪ್ರದೇಶದಲ್ಲಿ ಹಾದುಹೋಗುವ ಕಾರಣದಿಂದ ಪರಿಷ್ಕೃತ ಅಂದಾಜಿಗೆ ಸಚಿವ ಸಂಪುಟದ ಅನುಮೋದನೆ ಪಡೆಯುವುದು ಅವಶ್ಯವಿರುತ್ತದೆ.

ಅದರಂತೆ, ಗಾಂಧಿ ಪಥ ಗ್ರಾಮ ಪಥ (ನಮ್ಮ ಗ್ರಾಮ ನಮ್ಮ ರಸ್ತೆ ಹಂತ-4) ಯೋಜನೆಗೆ ದಿನಾಂಕ:28.09.2016ರ ಸಚಿವ ಸಂಪುಟವು ಅನುಮೋದಿಸಿದ ಪ್ರತಿ ಕಿ.ಮೀ. ಉದ್ದದ ರಸ್ತೆಗೆ ರೂ.76.00ಲಕ್ಷಗಳಂತೆ 4290 ಕಿ.ಮೀ. ಉದ್ದ ರಸ್ತೆಗೆ ರೂ.3261.00ಕೋಟಿಗಳಿಗೆ ಬದಲಾಗಿ ಪ್ರತಿ ಕಿ.ಮೀ.ಗೆ ರೂ.90.81 ಲಕ್ಷಗಳಂತೆ 189 ಗ್ರಾಮೀಣ ಮತಕ್ಷೇತ್ರಗಳ ವ್ಯಾಪ್ತಿಯ ಪರಿಷ್ಕೃತ 4385.71 ಕಿ.ಮೀ. ಉದ್ದದ ರಸ್ತೆಗಳಿಗೆ ಬೇಕಾಗುವ ಒಟ್ಟು ಅಂದಾಜು ಮೊತ್ತ ರೂ.3982.50 ಕೋಟಿಗಳನ್ನು ಮಂಜೂರು ಮಾಡಲು ಹಾಗೂ

ಈ ಯೋಜನೆಯ ರಸ್ತೆ ಮತ್ತು ಸೇತುವೆಯ ಡಿ.ಪಿ.ಆರ್.ಗಳನ್ನು ತಯಾರಿಸಲು ಇಲಾಖೆ ಹಾಗೂ ಎಮ್‌ಪ್ಯಾನಲ್ಡ್ ಸಮಾಲೋಚಕರಿಗೆ (Empanelled Consultants) ಪಾವತಿಸಲು ಈ ಹಿಂದೆ ಮಂಜೂರು ಮಾಡಿದ ರೂ.12.75 ಕೋಟಿಗಳಿಗೆ ಬದಲಾಗಿ ಪರಿಷ್ಕೃತ ರೂ.13.16 ಕೋಟಿಗಳ ಅನುದಾನವನ್ನು 2016-17ನೇ ಸಾಲಿಗೆ ಇಲಾಖೆಗೆ ಲೆಕ್ಕಶೀರ್ಷಿಕೆ "Revenue Releases to GPs – Rural Roads" ಅಡಿ ಒದಗಿಸಿದ ಅನುದಾನದಲ್ಲಿ ಭರಿಸಲು. ಈ ಯೋಜನೆಯನ್ನು ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆಯ ಮೂಲಕ ಅನುಷ್ಠಾನಗೊಳಿಸಲು ಸಚಿವ ಸಂಪುಟವು ಮೇಲೆ ಓದಲಾದ-3 ರಲ್ಲಿ ಅನುಮೋದನೆ ನೀಡಲಾಗಿರುತ್ತದೆ.

ಅದರಂತೆ, ಗಾಂಧಿ ಪಥ ಗ್ರಾಮ ಪಥ (ನಮ್ಮ ಗ್ರಾಮ ನಮ್ಮ ರಸ್ತೆ ಹಂತ-4) ಯೋಜನೆಯನ್ನು ರಾಜ್ಯದ ಗ್ರಾಮೀಣ ಮತಕ್ಷೇತ್ರಗಳ ವ್ಯಾಪ್ತಿಯಲ್ಲಿ ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆಯ ಮೂಲಕ ಕೆ.ಟಿ.ಟಿ.ಪಿ. ನಿಯಮಗಳನ್ವಯ ಟೆಂಡರ್ ಕರೆದು ಜಾರಿಗೆ ತರಲು ಅನುಮೋದನೆ ನೀಡಬೇಕಾಗಿರುವುದು ಅವಶ್ಯವಿರುತ್ತದೆ. ಪ್ರಯುಕ್ತ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:44:ಆರ್‌ಆರ್‌ಸಿ:2016, ಬೆಂಗಳೂರು, ದಿನಾಂಕ: 20.02.2017.</u>**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ರಾಜ್ಯದ 189 ಗ್ರಾಮೀಣ ವಿಧಾನ ಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಗಾಂಧಿಪಥ-ಗ್ರಾಮಪಥ (ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆ ಹಂತ-4) ಯೋಜನೆಯಲ್ಲಿ ಪರಿಷ್ಕೃತ ಅಂದಾಜಿನಂತೆ ಒಟ್ಟು 4385.71 ಕಿ.ಮೀ. ಉದ್ದದ ರಸ್ತೆಗಳನ್ನು ರೂ.3982.50 ಕೋಟಿಗಳ ಅಂದಾಜು ಮೊತ್ತದಲ್ಲಿ ಅಭಿವೃದ್ಧಿಪಡಿಸಲು ಹಾಗೂ ಕೆ.ಟಿ.ಟಿ.ಪಿ. ಕಾಯ್ದೆಯಡಿ ಟೆಂಡರ್ ಕರೆದು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಕೆಳಕಂಡ ಷರತ್ತುಗಳನ್ನು ಅಳವಡಿಸಿಕೊಂಡು ಯೋಜನೆಯನ್ನು ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ ಮುಖಾಂತರ ಕಾರ್ಯಕ್ರಮವನ್ನು ಅನುಷ್ಠಾನ ಮಾಡುವಂತೆ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

ಷರತ್ತುಗಳು:

1. ಗಾಂಧಿಪಥ-ಗ್ರಾಮಪಥ (ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆ ಹಂತ-4) ಯೋಜನೆಗೆ ಪ್ರತಿ ಕಿ.ಮೀ. ರಸ್ತೆ ಅಭಿವೃದ್ಧಿಗೆ ಅಂದಾಜು ರೂ.90.81 ಲಕ್ಷದಂತೆ 4385.71 ಕಿ.ಮೀ. ಉದ್ದದ ರಸ್ತೆ ಅಭಿವೃದ್ಧಿಗೆ ರೂ.3982.50 ಕೋಟಿಗಳಲ್ಲಿ ಅಭಿವೃದ್ಧಿಪಡಿಸುವುದು.

2. ಯೋಜನೆಯಲ್ಲಿ ಪ್ರತಿ ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿನ ಗ್ರಾಮಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕಾಲೋನಿಗಳಲ್ಲಿ ಸಂಪರ್ಕ ಕಲ್ಪಿಸಲು ಅನುಕ್ರಮವಾಗಿ 6 ಕಿ.ಮೀ. ಮತ್ತು 3 ಕಿ.ಮೀ.ನಂತೆ ಕಡ್ಡಾಯವಾಗಿ ಆಯ್ಕೆ ಮಾಡುವುದು. ಅದರಂತೆ ರಸ್ತೆ ನಿರ್ಮಾಣ ಕೈಗೊಂಡು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಾಂಗದವರು ವಾಸಿಸುವ ಕಾಲೋನಿಗಳಿಗೆ ಮುಖ್ಯ ರಸ್ತೆಯಿಂದ ಕೂಡು ರಸ್ತೆ ಸೌಲಭ್ಯ ಕಲ್ಪಿಸುವಂತೆ ಕ್ರಮ ಕೈಗೊಳ್ಳುವುದು.

3. ಗಾಂಧಿಪಥ-ಗ್ರಾಮಪಥ (ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆ ಹಂತ-4) ಯೋಜನೆಗೆ ರಸ್ತೆಗಳನ್ನು ಆಯ್ಕೆ ಮಾಡುವ ಸಂದರ್ಭದಲ್ಲಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರ ಪ್ರಸ್ತಾವನೆಗಳು /ಜನಪ್ರತಿನಿಧಿಗಳ ಕೋರಿಕೆಗಳನ್ನು ಸಹ ಪರಿಗಣಿಸುವುದು ಮತ್ತು ರಸ್ತೆಗಳನ್ನು ಅಭಿವೃದ್ಧಿಪಡಿಸಲು ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ-2 ರ ಮಾನದಂಡಗಳನ್ನು ಅನುಸರಿಸಿಯೇ ಮಾಡತಕ್ಕದ್ದು.

4. ಹಿಂದಿನ ಮೌಲ್ಯಮಾಪನದ ವರದಿಗಳಿಂದ ಕಲಿತ ಅನುಭವಗಳನ್ನು ಡಿಪಿಆರ್ ತಯಾರಿಕೆಯಲ್ಲಿ ತಪ್ಪದೇ ಅಳವಡಿಸತಕ್ಕದ್ದು, ಹಾಗೂ ಯೋಜನಾ ವರದಿಗಳನ್ನು (ಡಿಪಿಆರ್) ರಾಜ್ಯ ತಾಂತ್ರಿಕ ಸಮಾಲೋಚಕರಿಂದ / ಇಲಾಖೆ ವತಿಯಿಂದ ತಯಾರಿಸಿಕೊಂಡು ಅನುಮೋದಿತ ರಾಜ್ಯ ತಾಂತ್ರಿಕ ಸಂಸ್ಥೆ (STA) ಗಳಿಂದ ಪರಿಶೀಲಿಸಿಕೊಂಡು ಆಡಳಿತಾತ್ಮಕ ಅನುಮೋದನೆಗೆ ಸರ್ಕಾರಕ್ಕೆ ಸಲ್ಲಿಸುವುದು.

5. ರಸ್ತೆಯ ಆಯ್ಕೆ ಪ್ರಕ್ರಿಯೆಗಳು ಮುಕ್ತಾಯಗೊಂಡ ನಂತರ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯ ಮಾನದಂಡಗಳಂತೆ ಆಯ್ಕೆಯಾದ ರಸ್ತೆಗಳ ಡಿಪಿಆರ್ ಗಳನ್ನು ತಯಾರಿಸಿ ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆಯುವುದು.

6. ಎಸ್.ಸಿ.ಪಿ./ಟಿ.ಎಸ್.ಪಿ. ಯೋಜನೆಯ ಕ್ರಿಯಾಯೋಜನೆಗೆ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಗಳ ನೋಡಲ್ ಏಜನ್ಸಿಯ ಅನುಮೋದನೆಯನ್ನು ಸಹ ಪಡೆಯಲು ಕ್ರಮ ಕೈಗೊಳ್ಳುವುದು.

7. ಗಾಂಧಿಪಥ-ಗ್ರಾಮಪಥ ಯೋಜನೆಯ ರಸ್ತೆಗಳ ಡಿಪಿಆರ್ ಗಳನ್ನು ತಯಾರಿಸುವಾಗ, ನಿರ್ಮಾಣ ಮಾಡುವಾಗ 5 ವರ್ಷಗಳ ನಿರ್ವಹಣೆಯೂ ಒಳಗೊಂಡಂತೆ, ನಂತರ ಒಂದು ಸಲ ಮರುಡಾಂಬರೀಕರಣ (Renewals) ಮಾಡುವಾಗಲೂ ಸಹಿತ ಪಿ.ಎಂ.ಜಿ.ಎಸ್.ವೈ.-II ರ ನಿಯಮಗಳನ್ನು (Norms) ಕಡ್ಡಾಯವಾಗಿ ಪಾಲಿಸುವುದು.

8. ಗುಣಮಟ್ಟ ಕಾಪಾಡುವ ಹಾಗೂ ಪಾರದರ್ಶಕತೆ ದೃಷ್ಟಿಯಿಂದ ಆಯ್ಕೆಗೊಂಡ ಗ್ರಾಮೀಣ ಮತಕ್ಷೇತ್ರದ ರಸ್ತೆ ಕಾಮಗಾರಿಗಳನ್ನು ಒಟ್ಟುಗೂಡಿಸಿ ರೂ.10.00 ಕೋಟಿಯಿಂದ ರೂ.20.00ಕೋಟಿಗಳಿಗೆ ಕಾಮಗಾರಿಗಳ ಗುಂಪು ರಚಿಸಿ (Package Tender) e-Tender ಮೂಲಕ ಗುತ್ತಿಗೆದಾರರನ್ನು ನೇಮಿಸಿ ಅನುಷ್ಠಾನಗೊಳಿಸುವುದು.

9. ಗುಣಮಟ್ಟ ರಸ್ತೆಗಳ ನಿರ್ಮಾಣಕ್ಕಾಗಿ ಪಿ.ಎಂ.ಜಿ.ಎಸ್.ವೈ.-II ರಡಿ ಅಳವಡಿಸಿಕೊಂಡಿರುವ 3 ಹಂತದ ಗುಣಮಟ್ಟ ನಿಯಂತ್ರಣ ವ್ಯವಸ್ಥೆಯನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳುವುದು.

10. ಗಾಂಧಿಪಥ-ಗ್ರಾಮಪಥ (ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆ ಹಂತ-4) ಯೋಜನೆಯಡಿ ಅನುಷ್ಠಾನಗೊಳಸುತ್ತಿರುವ ಅನುಮೋದನೆಗೊಂಡ ಕ್ರಿಯಾಯೋಜನೆಯಲ್ಲಿರುವ ಎಲ್ಲಾ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಕಡ್ಡಾಯವಾಗಿ ಅಳವಡಿಸುವುದು, ಹಣ ಪಾವತಿಯನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಿಂದ ಪಡೆಯಲಾದ ಪಾವತಿ ಆದೇಶವಿದ್ದಲ್ಲಿ ಮಾತ್ರ ಕಾಮಗಾರಿಗಳ ಬಿಲ್ ಪಾವತಿಯನ್ನು ಮಾಡುವುದು.

11. ಗಾಂಧಿಪಥ-ಗ್ರಾಮಪಥ (ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆ ಹಂತ-4) ಯೋಜನೆಯನ್ನು ಸ್ವತಂತ್ರ ಮೌಲ್ಯಮಾಪನಕ್ಕೆ ಒಳಪಡಿಸುವುದು.

ಈ ಆದೇಶವನ್ನು ಯೋಜನಾ ಇಲಾಖೆಯ ಆದೇಶ ಸಂಖ್ಯೆ:ಯೋಇ:33:ಜಿಯೋವಿ:2016, ದಿ:22-06-2016 ರಲ್ಲಿ ನೀಡಿದ ಸಹಮತಿ ಹಾಗೂ ಆರ್ಥಿಕ ಇಲಾಖೆಯ ಟಿಪ್ಪಣಿ ಕಂಡಿಕೆ ಸಂಖ್ಯೆ: ಆಇ/227/ವೆಚ್ಚ-6/2016 ದಿನಾಂಕ 31.01.2017 ರ ಮತ್ತು ದಿನಾಂಕ 15.02.2017 ರ ಸಚಿವ ಸಂಪುಟದ ನಿರ್ಣಯ ಪ್ರಕರಣ ಸಂಖ್ಯೆ: ಸಿ-95/2017 ರಲ್ಲಿ ನೀಡಿದ ಅನುಮೋದನೆ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಾ.ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಸರ್ಕಾರದ ಪದನಿಮಿತ್ತ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು:

1. ಮಹಾಲೇಖಪಾಲರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1) ಮತ್ತು (ಆಡಿಟ್-2), ಕರ್ನಾಟಕ, ಬೆಂಗಳೂರು.

3. ಮಾನ್ಯ ಮುಖ್ಯ ಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ಮುಖ್ಯ ಮಂತ್ರಿಗಳ ಕಾರ್ಯಾಲಯ, ವಿಧಾನ ಸೌಧ, ಬೆಂಗಳೂರು.
4. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು (ಸಚಿವ ಸಂಪುಟ), ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು , ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
8. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, (PMU)(IF), 5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
10. ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
11. ವಿಶೇಷಾಧಿಕಾರಿಗಳು (ಜಿ.ಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
12. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
13. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
14. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಟ್ರಜರಿ ಡಿಪಾರ್ಟ್‌ಮೆಂಟ್, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
15. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
16. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಗ್ರಾಮೀಣಾಭಿವೃದ್ಧಿ ಭವನ, 3ನೇ ಮಹಡಿ, ಬೆಂಗಳೂರು-9.
17. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, 2ನೇ ಮಹಡಿ, ಬೆಂಗಳೂರು-9.
18. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
19. ಎಲ್ಲಾ ಪಂಚಾಯತ್ ರಾಜ್ ಇಂಜಿನಿರಿಂಗ್ ವೃತ್ತಗಳ ಅಧೀಕ್ಷಕ ಇಂಜಿನಿಯರುಗಳಿಗೆ.
20. ಎಲ್ಲಾ ಪಿ.ಎಂ.ಜಿ.ಎಸ್.ವೈ ಯೋಜನಾ ವಿಭಾಗಗಳ ಕಾರ್ಯಪಾಲಕ ಇಂಜಿನಿಯರುಗಳಿಗೆ
21. ಎಲ್ಲಾ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಕಾರ್ಯಪಾಲಕ ಇಂಜಿನಿಯರುಗಳಿಗೆ.
22. ಮಾಹಿತಿ ಕೇಂದ್ರಕ್ಕೆ (10 ಪ್ರತಿಗಳು).
23. ರಕ್ಷಾ ಕಡತ/ ಹೆಚ್ಚುವರಿ ಪ್ರತಿ.